# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

**ದಿನಾಂಕ: 08.12.2021 ರಂದು ಮಧ್ಯಾಹ್ನ 12.00 ಗಂಟೆಗೆ ಶ್ರೀ ರಂಗನಾಥ್ ಬಿ.ಆರ್ ನೋಡಲ್ ಅಧಿಕಾರಿ, ವಾರ್ಡ್ 70 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ರಂಗನಾಥ್ ಬಿ.ಆರ್ | ನೋಡಲ್ ಅಧಿಕಾರಿ–ವಾರ್ಡ್ ನಂ.70 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 70 |
| 3 | ಕೆ.ಶಿವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು |
| 4 | ಡಾ.ನಿಹಾಲ್ ಅಬ್ಬಾಸ್ | ಮೆಡಿಕಲ್ ಆಫೀಸರ್ |
| 5 | ಟಿ ಶೇಖರ್ | ಕಂದಾಯ ಪರಿವೀಕ್ಷಕರು |
| 6 | ಎನ್.ವೆಂಕಟೇಶ್ | ಕಂದಾಯ ಮೌಲ್ಯಮಾಪಕರು |
| 7 | ಹರೀಶ್ | ಬೀದಿದೀಪಗಳ ನಿರ್ವಹಣೆಯ ಗುತ್ತಿಗೆದಾರರು |

**:ನಡಾವಳಿಯ ವರದಿ:**

➤ ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

<u>ವಿಷಯ ಸಂಖ್ಯೆ: 1:–</u> **ಕೋವಿಡ್–19 ಬಗ್ಗೆ**

ಶ್ರೀ ಕೆ.ಶಿವಲಿಂಗಯ್ಯ, ಆರೋಗ್ಯ ಪರಿವೀಕ್ಷಕರು, ಮಾತನಾಡಿ, ವಾರ್ಡ್ 70ರ ವ್ಯಾಪ್ತಿಯಲ್ಲಿ ಕೋವಿಡ್–19 ಕಾರಣದಿಂದಾಗಿ ಮರಣ ಹೊಂದಿರುವುವರ ಕುಟುಂಬಗಳಿಗೆ ಪರಿಹಾರ ನೀಡುವ ಬಗ್ಗೆ ಪ್ರಸ್ತಾಪಿಸಿ, ವಾರ್ಡ್ 70ರ ವ್ಯಾಪ್ತಿಯಲ್ಲಿ 77 ಮಂದಿ ಮೃತಪಟ್ಟಿದ್ದು, ಅದರಲ್ಲಿ 34 ಮಂದಿ ಕುಟುಂಬದವರು ಪರಿಹಾರಕ್ಕಾಗಿ ಅರ್ಜಿ ಸಲ್ಲಿಸಿದ್ದು ಇದರಲ್ಲಿ 8 ಅರ್ಜಿಗಳು ಅನುಮೋದನೆಗೊಂಡಿದ್ದು, 12 ಅರ್ಜಿಗಳಲ್ಲಿ "No Data Found" ಎಂದು ಕಂಡುಬಂದಿರುತ್ತದೆ & 14 ಅರ್ಜಿಗಳು ಪ್ರಕ್ರಿಯೆಯಲ್ಲಿರುತ್ತವೆ ಹಾಗೂ ಉಳಿದ 43 ಅರ್ಜಿಗಳನ್ನು ಅರ್ಜಿದಾರರು ಸಲ್ಲಿಸಿರುವುದಿಲ್ಲ ಎಂದು ಸಭೆಗೆ ತಿಳಿಸಿದರು.

ಮುಂದುವರೆದು ಮಾತನಾಡಿ ವಾರ್ಡ್ 70ರ ವ್ಯಾಪ್ತಿಯಲ್ಲಿ ಇದುವರೆವಿಗೂ ನಡೆದಿರುವ ಲಸಿಕಾಕರಣದ ಬಗ್ಗೆ ಮಾಹಿತಿ ನೀಡಿದರು. 1$^{st}$ Dose-45233 ಜನರು ಹಾಗೂ 2$^{nd}$ Dose-41579 ಜನರು ಲಸಿಕೆಯನ್ನು ಪಡೆದಿರುತ್ತಾರೆ.

**ವಿಷಯ ಸಂಖ್ಯೆ: 2:- ಘನ ತ್ಯಾಜ್ಯ ನಿರ್ವಹಣೆ**

ಶ್ರೀ ಕೆ.ಶಿವಲಿಂಗಯ್ಯ, ಆರೋಗ್ಯ ಪರಿವೀಕ್ಷಕರು, ಮಾತನಾಡಿ, ಎಲ್ಲೆಂದರಲ್ಲಿ ಕಸ ಎಸೆಯುವವರಿಂದ ನವೆಂಬರ್ ತಿಂಗಳಲ್ಲಿ 9100/- ರೂ.ಗಳನ್ನು ದಂಡ ವಸೂಲಿ ಮಾಡಲಾಗಿದೆ ಹಾಗೂ 01/12/2021ರಿಂದ ಇಲ್ಲಿಯವರೆಗೆ 1800 ರೂ.ಗಳ ದಂಡವನ್ನು ಸಂಗ್ರಹಿಸಿರುವುದಾಗೀ ತಿಳಿಸಿದರು.

ಮುಂದುವರೆದು ಮಾತನಾಡಿ ವಾರ್ಡ್ 70ರ ವ್ಯಾಪ್ತಿಯ 31 ಬ್ಲಾಕ್‌ಗಳಲ್ಲಿ ಶುಚಿಮಿತ್ರ ಮಾಡಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

**ವಿಷಯ ಸಂಖ್ಯೆ: 3:- ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಳಾಂತರಿಸುವ ಬಗ್ಗೆ**

- ಮೆಡಿಕಲ್ ಆಫೀಸರ್ ಡಾ. ನಿಹಾಲ್ ಅಬ್ಬಾಸ್ ರವರು ಮಾತನಾಡಿ ಪ್ರಸ್ತುತ ವಾರ್ಡ್ 70ರ ವ್ಯಾಪ್ತಿಯ ವಸತಿ ಪ್ರದೇಶದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಳಾಂತರಿಸುವಂತೆ ಸಾರ್ವಜನಿಕರು ಒತ್ತಡ ಹಾಕುತ್ತಿರುವುದನ್ನು ಹಾಗೂ ಅಗತ್ಯವಾದ ಸ್ಥಳಾವಕಾಶ ಇಲ್ಲದರಿರುವುದರಿಂದ ಸದರಿ ಆರೋಗ್ಯ ಕೇಂದ್ರವನ್ನು ಸ್ಥಳಾಂತರಿಸುವಂತೆ ಮನವಿ ಸಲ್ಲಿಸಿದರು.
  - ಇದಕ್ಕೆ ನೋಡಲ್ ಅಧಿಕಾರಿರವರು ಪ್ರತಿಕ್ರಿಯಿಸಿ ವಾರ್ಡ್ ವ್ಯಾಪ್ತಿಯಲ್ಲಿ ಸರ್ಕಾರಿ ಜಾಗಗಳು ಇಲ್ಲದಿರುವುದರಿಂದ ಬೇರೆ ಖಾಸಗಿ ಕಟ್ಟಡದಲ್ಲಿ ಸ್ಥಳಾಂತರಿಸುವ ಬಗ್ಗೆ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.70ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಸದಸ್ಯ ಕಾರ್ಯದರ್ಶಿ<br>ಹಾಗೂ ಸಹಾಯಕ ಅಭಿಯಂತರರು<br>ವಾರ್ಡ್ 70, ರಾಜಗೋಪಾಲ ನಗರ<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ವಾರ್ಡ್ ಸಮಿತಿ ಅಧ್ಯಕ್ಷರು<br>ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ<br>ವಾರ್ಡ್ ನಂ.70, ರಾಜಗೋಪಾಲ ನಗರ<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.

3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ